ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ರಾಜ್ಯದಲ್ಲಿ ಪೊಲೀಸ್ ಇಲಾಖೆಯ ಪ್ರಕರಣಗಳಲ್ಲಿ ವಶಕ್ಕೆ ಪಡೆದಿರುವ ದ್ವಿಚಕ್ರ ವಾಹನಗಳ ಬಗ್ಗೆ

ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1316 (1483) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪೊಲೀಸ್ ಇಲಾಖೆಯು ಹಲವಾರು ಪ್ರಕರಣಗಳಲ್ಲಿ ವಶಕ್ಕೆ ಪಡೆದಿರುವ ದ್ವಿಚಕ್ರ, ತ್ರಿಚಕ್ರ, ಲಘು ಮತ್ತು ಭಾರಿ ಮೋಟರ್ ವಾಹನಗಳ ಸಂಖ್ಯೆಯೆಷ್ಟು;

(ಆ) ಇಂತಹ ವಾಹನಗಳು ಬಹಳಷ್ಟು ವರ್ಷಗಳಿಂದ ಪೊಲೀಸ್ ಇಲಾಖೆಯ ವಶದಲ್ಲಿದ್ದು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ರೀತಿ ರಾಷ್ಟ್ರೀಯ ನಷ್ಟವಾಗುತ್ತಿರುವುದನ್ನು ತಡೆಯುವುದಕ್ಕೆ ಯಾವುದಾದರೊಂದು ಯೋಜನೆಯನ್ನು ರೂಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯೋಜನೆಯ ಮಾಹಿತಿ ನೀಡುವುದು;

(ಈ) ಹಾಗಿಲ್ಲದಿದ್ದಲ್ಲಿ, ರಾಷ್ಟ್ರೀಯ ನಷ್ಟವಾಗುತ್ತಿರುವುದನ್ನು ತಡೆಯುವ ಯೋಜನೆಯನ್ನು ರೂಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು? (ಮಾಹಿತಿ ನೀಡುವುದು)